ಶಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:     ದಿನಾಂಕ : DATE : 16/12/20

# ಅಧಿವೇಶನ ನಡೆಯಲ್ಲ



» ಸಂಸತ್‌ನ ಚಳಿಗಾಲದ ಅಧಿವೇಶನಕ್ಕೆ ಕರೊನಾ ಗ್ರಹಣ

» ಜನವರಿಯಲ್ಲಿ ಬಜೆಟ್ ಸೆಷನ್

ನವದೆಹಲಿ: ಕರೊನಾ ಪಿಡುಗಿನ ಹಿನ್ನೆಲೆಯಲ್ಲಿ ಈ ಬಾರಿ ಸಂಸತ್‌ನ ಚಳಿಗಾಲದ ಅಧಿವೇಶನ ನಡೆಸದಿರಲು ಕೇಂದ್ರ ಸರ್ಕಾರ ತೀರ್ಮಾನಿಸಿದೆ. ಲೋಕಸಭೆಯ ಕಾಂಗ್ರೆಸ್ ನಾಯಕ ಅಧಿರ್ ರಂಜನ್ ಚೌಧರಿಗೆ ಬರೆದಿರುವ ಪತ್ರದಲ್ಲಿ ಸಂಸದೀಯ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಅವರು ಈ ವಿಷಯ ತಿಳಿಸಿದ್ದಾರೆ. ಅಲ್ಲದೆ ಜನವರಿಯಲ್ಲಿ ಬಜೆಟ್ ಅಧಿವೇಶನ ನಡೆಸುವ ಸುಳಿವನ್ನೂ ನೀಡಿದ್ದಾರೆ. 'ಕರೊನಾ ಕಾರಣದಿಂದಾಗಿ ಚಳಿಗಾಲದಲ್ಲಿ ಹೆಚ್ಚು ಜಾಗೃತರಾಗಿರುವುದು ಅವಶ್ಯ. ದೆಹಲಿ ಸೇರಿ ದೇಶದ ವಿವಿಧೆಡೆ ಕರೊನಾ ಪ್ರಕರಣಗಳಲ್ಲಿ ಏರಿಕೆ ಕಂಡುಬಂದಿರುವುದು ಚಳಿಗಾಲದ ಅಧಿವೇಶನ ನಡೆಸದಿರುವ ತೀರ್ಮಾನಕ್ಕೆ ಬರಲಾಗಿದೆ' ಎಂದಿದ್ದಾರೆ. ವಿವರ ಪುಟ 9

# ಚಳಿಗಾಲ ಅಧಿವೇಶನ ರದ್ದುಗೊಳಿಸಿದ ಕೇಂದ್ರ



» ಕಾಂಗ್ರೆಸ್ ನಾಯಕರ ಆಕ್ಷೇಪ

ನವದೆಹಲಿ: ಕರೊನಾ ವೈರಸ್ ಸಾಂಕ್ರಾಮಿಕತೆ ಹಿನ್ನೆಲೆಯಲ್ಲಿ ಈ ಬಾರಿ ಸಂಸತ್ತಿನ ಚಳಿಗಾಲದ ಅಧಿವೇಶನ ನಡೆಸದಿರಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ಸಂಸದೀಯ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಈ ವಿಚಾರವನ್ನು ಅಧಿಕೃತವಾಗಿ ಪ್ರಕಟಿಸಿದ್ದಾರೆ.

ಕೋವಿಡ್ ಹರಡುವುದನ್ನು ತಡೆಯುವ ಕ್ರಮವಾಗಿ ಅಧಿವೇಶನ ರದ್ದುಪಡಿಸಲು ಎಲ್ಲ ರಾಜಕೀಯ ಪಕ್ಷಗಳು ಒಲವು ವ್ಯಕ್ತಪಡಿಸಿವೆ ಎಂದು ಕಾಂಗ್ರೆಸ್ ಪಕ್ಷದ ಲೋಕಸಭಾ ನಾಯಕ ಅಧೀರ್ ರಂಜನ್ ಚೌಧರಿಗೆ ಬರೆದಿರುವ ಪತ್ರದಲ್ಲಿ ಜೋಶಿ ತಿಳಿಸಿದ್ದಾರೆ. ಜನವರಿಯಲ್ಲಿ ನೇರವಾಗಿ ಬಜೆಟ್ ಅಧಿವೇಶನ ನಡೆಸಲಾಗುವುದು ಎಂದಿದ್ದಾರೆ. ಆದರೆ, ಈ ವಿಚಾರದಲ್ಲಿ ಸರ್ಕಾರ ತನ್ನೊಂದಿಗೆ ಸಮಾಲೋಚಿಸಿಲ್ಲ ಎಂದು ಕಾಂಗ್ರೆಸ್ ಆಪಾದಿಸಿದೆ.

## 200 ಸಂಸದರು ಹಿರಿಯ ನಾಗರಿಕರು

ರಾಜ್ಯಸಭೆ ಹಾಗೂ ಲೋಕಸಭೆ ಸದಸ್ಯರಲ್ಲಿ ಸುಮಾರು 200 ಸಂಸದರು 65 ಅಥವಾ ಅದಕ್ಕಿಂತ ಹೆಚ್ಚು ವಯೋಮಾನದವರಾಗಿದ್ದು ಕರೊನಾ ಸೋಂಕಿತರಾಗುವ ಅಪಾಯ ಅಧಿಕವಾಗಿರುತ್ತದೆ. ಹೀಗಾಗಿ ಅಧಿವೇಶನ ರದ್ದುಗೊಳಿಸುವ ನಿರ್ಣಯ ಕೈಗೊಳ್ಳಲಾಗಿದೆ ಎಂದು ಕೇಂದ್ರ ಸರ್ಕಾರ ಹೇಳಿಕೊಂಡಿದೆ.

ಹೊಸ ಕೃಷಿ ಕಾನೂನುಗಳ ವಿರುದ್ಧ ರೈತರ ಚಳವಳಿ ನಡೆಯುತ್ತಿದ್ದು ವಿವಾದಾತ್ಮಕ ಕಾಯ್ದೆಗಳ ಚರ್ಚೆಗೆ ವಿಶೇಷ ಅಧಿವೇಶನ ಕರೆಯುವಂತೆ ಚೌಧರಿ ಪತ್ರದ ಮೂಲಕ ಆಗ್ರಹಿಸಿದ್ದರು. ಇದಕ್ಕೆ ಜೋಶಿ ಉತ್ತರ ನೀಡಿದ್ದಾರೆ. ಎಲ್ಲ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಮಾತುಕತೆ ನಡೆಸಲಾಗಿದೆ. ಕರೊನಾ ಕಾರಣ ಅಧಿವೇಶನ ನಡೆಸಬಾರದೆಂಬ ಸಹಮತ ವ್ಯಕ್ತವಾಗಿದೆ ಎಂದು ಪತ್ರದಲ್ಲಿ ಅವರು ವಿವರಿಸಿದ್ದಾರೆ.

ದೆಹಲಿಯಲ್ಲಿ ಕೋವಿಡ್ ಪ್ರಕರಣಗಳು ಉಲ್ಬಣಿಸಿದೆ. ಸಾಂಕ್ರಾಮಿಕತೆ ತಡೆಗಟ್ಟಲು ಚಳಿಗಾಲದ ತಿಂಗಳು ನಿರ್ಣಾಯಕವಾಗಿವೆ. ಈಗ ನಾವು ಡಿಸೆಂಬರ್ ಮಧ್ಯಭಾಗದಲ್ಲಿದ್ದೇವೆ. ಶೀಘ್ರವೇ ಕೋವಿಡ್ ಲಸಿಕೆ ಲಭ್ಯವಾಗುವ ನಿರೀಕ್ಷೆಯಿದೆ. ಈ ಹಿನ್ನೆಲೆಯಲ್ಲಿ ವಿವಿಧ ಪಕ್ಷಗಳ ನಾಯಕರೊಂದಿಗೆ ಔಪಚಾರಿಕವಾಗಿ ಚರ್ಚಿಸಿದ್ದು, ಅವರೆಲ್ಲರೂ ಕಳವಳ ವ್ಯಕ್ತಪಡಿಸಿದ್ದಾರೆ. ಚಳಿಗಾಲದ ಅಧಿವೇಶನ ನಡೆಸುವುದು ಬೇಡ ಎಂದು ಸಲಹೆ ನೀಡಿದ್ದಾರೆ. ಆದಷ್ಟು ಬೇಗ ಮುಂದಿನ ಅಧಿವೇಶನ ನಡೆಸುವುದು ಸರ್ಕಾರದ ಬಯಕೆಯಾಗಿದೆ. 2021 ಜನವರಿಯಲ್ಲೇ ಬಜೆಟ್ ಅಧಿವೇಶನ ನಡೆಸುವುದು ಸೂಕ್ತವೆಂಬ ಅಭಿಪ್ರಾಯ ವ್ಯಕ್ತವಾಗಿದೆ ಎಂದು ಜೋಶಿ ತಿಳಿಸಿದ್ದಾರೆ.

**ಚೌಧರಿ ಆಕ್ಷೇಪ:** ಅನ್ನದಾತರ ಚಳವಳಿಯ ಕಾವನ್ನು ಎದುರಿಸಲಾಗದ ಸರ್ಕಾರ ಈ ಪತ್ರದ ಮರೆಯಲ್ಲಿ ರಕ್ಷಣೆ ಪಡೆಯಲು ಯತ್ನಿಸುತ್ತಿದೆ ಎಂದು ಕಾಂಗ್ರೆಸ್ ನಾಯಕ ಅಧೀರ್ ರಂಜನ್ ಚೌಧರಿ ಪ್ರತಿಕ್ರಿಯಿಸಿದ್ದಾರೆ. 'ಸಂಸತ್ತಿನಲ್ಲಿ ರೈತರ ಪ್ರಶ್ನೆ ಚರ್ಚಿಸಿ ಪರಿಹಾರ ಕಂಡುಕೊಳ್ಳುವುದು ನಮ್ಮ ಉದ್ದೇಶವಾಗಿದೆ. ರೈತರು ಚಳಿಯಲ್ಲಿ ಪ್ರತಿಭಟನೆ ನಡೆಸುತ್ತಿರುವ ರೀತಿ ದೇಶದ ಪ್ರತಿಷ್ಠೆಗೆ ಒಳ್ಳೆಯದಲ್ಲ' ಎಂದು ಹೇಳಿದ್ದಾರೆ.